ಪ್ರಧಾನ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ಕಾರಿಯವರ ನ್ಯಾಯಾಲಯ, ಕೊಡಗು, ಮಡಿಕೇರಿ

ಸಿ.ಸಿ.ನಂಃ **1092/16**

ಪಿಡಬ್ಲ್ಯುಃ - **5**

ಸಿಡಬ್ಲುಃ - **12**

ದಿನಾಂಕಃ **23.08.2023** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿದಾರರ ಹೆಸರು | - | ರಘು ಕೆ ಕೆ |
| ತಂದೆಯ ಹೆಸರು | - | ಕಾಳೇ ಗೌಡ |
| ವಯಸ್ಸು | - | 41 ವರ್ಷ |
| ವೃತ್ತಿ | - | ಪಿ. ಐ. ಹೊಸಕೋಟೆ ಸಂಚಾರಿ ಪೊಲೀಸ್ ಠಾಣೆ, ಬೆಂಗಳೂರು ಗ್ರಾಮಾಂತರ |
| ವಾಸಸ್ಥಳ | - | ಹೊಸಕೋಟೆ |

ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ-

ಸಾಕ್ಷಿಯು ವೀಡಿಯೋ ಕಾನ್ಪರೆನ್ಸ್ ಮೂಲಕ ಹಾಜರಾಗಿರುತ್ತಾರೆ. ಸಾಕ್ಷಿಯ ವಿಚಾರಣೆಗೆ ಗೀತಾ, ಮಹಿಳಾ ಕಾನ್ಸ್ ಟೇಬಲ್ ಅವರನ್ನು ರಿಮೋಟ್ ಪಾಯಿಂಟ್ ಕೋ- ಆಡಿನೇಟರ್ ಆಗಿ ನೇಮಿಸಲಾಯಿತು. ನ್ಯಾಯಾಲಯದ ಸಿಬ್ಬಂದಿಯಾದ ಶ್ರೀಮತಿ ಪೂರ್ಣಿಮಾ ರವರನ್ನು ನ್ಯಾಯಾಲಯದ ಪಾಯಿಂಟ್ ನ ಕೋ- ಆಡಿನೇಟರ್ ಆಗಿ ನೇಮಕ ಮಾಡಲಾಯಿತು. ನಂತರ ಸಾಕ್ಷಿಯ ವಿಚಾರಣೆಯನ್ನು ಈ ಮುಂದಿನಂತೆ ಬರೆದುಕೊಳ್ಳಲಾಯಿತು.

**2.** ನಾನು ನವೆಂಬರ್- **2014** ರಿಂದ ಮೇ- **2016** ರವರೆಗೆ ನಾಪೋಕ್ಲು ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

**3.** ದಿನಾಂಕಃ **07.04.2016** ರಂದು ಮದ್ಯಾಹ್ನ **3-30** ರ ಸಮಯದಲ್ಲಿ ನಾನು ಠಾಣಾ ಉಸ್ತುವಾರಿಯಲ್ಲಿರುವಾಗ ಚಾಸಾ-**1** ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಅದರ ಆಧಾರದ ಮೇಲೆ ಠಾಣಾ ಮೊಕದ್ದಮೆ ಸಂಖ್ಯೆ **53/2016** ರಂತೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮತ್ತು ದೂರನ್ನು ಮೇಲಾಧಿಕಾರಿಗಳಿಗೆ ಮತ್ತು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

4. ಸಾಕ್ಷಿ ದೂರು ಮತ್ತು ಪ್ರ. ವ. ವರದಿಯನ್ನು ನೋಡಿ ತಮ್ಮ ಸಹಿ ಗುರುತಿಸಿರುತ್ತಾರೆ. ದೂರು ಈಗಾಗಲೇ ನಿಪಿ-1 ಎಂದು ಗುರುತಿಸಲ್ಪಟ್ಟಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರ. ವ. ವರದಿಯನ್ನು ನಿಪಿ-6 ಎಂದು, ಸಾಕ್ಷಿಯ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

5. ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಸ್ಥಳ ಮಹಜರು ಬರೆದಿರುತ್ತೇನೆ. ಆ ಸಮಯದಲ್ಲಿ ಚಾಸಾ-2 ಮತ್ತು 3 ರವರು ಹಾಜರಿದ್ದು ಅವರ ಸಹಿ ಪಡೆದಿರುತ್ತೇನೆ. ಸಾಕ್ಷಿ ನಿಪಿ-2 ನ್ನು ನೋಡಿ ತಮ್ಮ ಸಹಿ ಗುರುತಿಸಿರುತ್ತಾರೆ. ಅದನ್ನು ನಿಪಿ-2(ಡಿ) ಎಂದು ಗುರುತಿಸಲಾಯಿತು. ಆ ಸಮಯದಲ್ಲಿ ಎಂಒ-1 ನ್ನು ಅಮಾನತು ಪಡಿಸಿಕೊಂಡಿರುತ್ತೇನೆ. ಸಾಕ್ಷಿ ಎಂಒ-1 ನ್ನು ನೋಡಿ ಗುರುತಿಸಿರುತ್ತಾರೆ. ವಶಕ್ಕೆ ಪಡೆದ ಮಾಲನ್ನು ಮಾಲುಪಟ್ಟಿಗೆ ಅಳವಡಿಸಿಕೊಂಡಿರುತ್ತೇನೆ. ನಂತರ ಪ್ರಕರಣ ಕಡತವನ್ನು ಚಾಸಾ-13 ರವರಿಗೆ ಹಸ್ತಾಂತರಿಸಿರುತ್ತೇನೆ.

<u>ಪಾಟೀ ಸವಾಲುಃ - ಆರೋಪಿ ಪರ ಶ್ರೀ. ಎ ಎ ಪಿ ವಕೀಲರಿಂದಃ</u>

6. ನಾನು ಚಾಸಾ-1 ರವರಿಂದ ಯಾವುದೇ ಲಿಖಿತ ದೂರು ಪಡೆದಿಲ್ಲ, ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿಲ್ಲ, ಯಾವುದೇ ಸ್ಥಳ ಮಹಜರು ಬರೆದಿಲ್ಲ ಹಾಗೂ ಯಾವುದೇ ಸಾಕ್ಷಿದಾರರ ಸಹಿ ಪಡೆದಿಲ್ಲ, ಎಂಒ-1 ನ್ನು ವಶಕ್ಕೆ ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ಮಾಲುಪಟ್ಟಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಕರಣವನ್ನು ಆರೋಪಿಯ ವಿರುದ್ಧ ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ - ಇಲ್ಲ

ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ. ಹೇ. ಕೇ. ಸರಿ ಇದೆ.

ಪ್ರಧಾನ ಜೆಎಂಎಫ್‌ಸಿ, ಮಡಿಕೇರಿ